# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1881** |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಡಾ|| ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 23.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗೃಹ ಬಳಕೆಯ ಎಲ್.ಪಿ.ಜಿ ಸಿಲಿಂಡರ್ ವಿತರಣೆ ಸಂದರ್ಭದಲ್ಲಿ ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ತೈಲ ಕಂಪನಿಗಳಿಂದ ಸ್ಪಷ್ಟೀಕರಣ ಪಡೆಯಲಾಗಿದ್ದು, ನಿಗಧಿಪಡಿಸಿದ ಚಿಲ್ಲರೆ ಮಾರಾಟ ದರವನ್ನು (RSP) ತೈಲ ಕಂಪನಿಗಳು ಗ್ಯಾಸ್ ಏಜೆನ್ಸಿಗಳಿಗೆ ತಿಳಿಸಿ , ಅದೇ ಮೊತ್ತವನ್ನು ಗ್ರಾಹಕರಿಂದ ಪಡೆಯಲು ಸೂಚಿಸಲಾಗಿರುತ್ತದೆ, ಸದರಿ RSP ಯಲ್ಲಿ ತೆರಿಗೆ ಮತ್ತು Home delivery ದರಗಳು ಒಳಗೊಂಡಿರುತ್ತದೆ. |
| ಆ | ಎಲ್.ಪಿ.ಜಿ ಸಿಲಿಂಡರ್ ವಿತರಣೆ ಸಂದರ್ಭದಲ್ಲಿ 50 ರಿಂದ 100 ರೂ ವರೆಗೆ ಹೆಚ್ಚುವರಿಯಾಗಿ ಅನಧಿಕೃತ ವಸೂಲಿಯಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗ್ಯಾಸ್ ಏಜೆನ್ಸಿಯವರು ಸಿಲಿಂಡರ್ ಸರಬರಾಜು ಮಾಡಲು ಹೆಚ್ಚುವರಿ ದರ ಪಡೆಯುವುದಕ್ಕೆ ಅವಕಾಶವಿರುವುದಿಲ್ಲ. |
| ಇ | ಅನಧಿಕೃತ ಹೆಚ್ಚುವರಿ ವಸೂಲಿ ತಡೆಯಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳಲಿದೆ? | ಹೆಚ್ಚುವರಿ ದರ ಪಡೆಯುತ್ತಿರುವ ಬಗ್ಗೆ ದೂರುಗಳು ಸ್ವೀಕೃತವಾದಲ್ಲಿ ಮಾರ್ಕೆಟಿಂಗ್ ಡಿಸಿಪ್ಲೀನ್ ಗೈಡ್‌ಲೈನ್ಸ್- 2022 ರನ್ವಯ ಕ್ರಮವಹಿಸಲಾಗುವುದು. ಎಲ್.ಪಿ.ಜಿ ಸಿಲಿಂಡರ್ ವಿತರಣೆ ಸಂದರ್ಭದಲ್ಲಿ ಸಾರ್ವಜನಿಕರಿಂದ ಹೆಚ್ಚುವರಿ ಹಣ ವಸೂಲಿ ಮಾಡಿದ್ದಲ್ಲಿ ದೂರು ಸಲ್ಲಿಸಲು ಅನುಕೂಲವಾಗುವಂತೆ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯವಾಣಿ-ಟೋಲ್ ಫ್ರೀ ನಂಬರ್ 18005991100 ನ್ನು ಜಾರಿ ಮಾಡಲಾಗಿರುತ್ತದೆ.<br><br>ಹೆಚ್ಚಿನ ಜನನಿಬಿಡ ಸ್ಥಳಗಳಲ್ಲಿ ಕಾನೂನು ಮಾಪನಶಾಸ್ತ್ರ ಇಲಾಖೆಯಿಂದ ಆಗಾಗ್ಗೆ ಗ್ರಾಹಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ತೂಕ ಮತ್ತು |

| | | |
|---|---|---|
| | | ಅಳತೆಯಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಹಾಗೂ ಎಂಆರ್‌ಪಿ ದರಕ್ಕಿಂತ ಹೆಚ್ಚಿನ ದರ ಪಡೆದಲ್ಲಿ ಇಲಾಖೆಗೆ ದೂರು ಸಲ್ಲಿಸುವಂತೆ ಗ್ರಾಹಕರಲ್ಲಿ ಅರಿವು ಮೂಡಿಸಲಾಗುತ್ತಿದೆ. |

**ಆನಾಸ 28 ಎಫ್‌ಪಿಪಿ 2026 (ಇ-ಆಫೀಸ್)**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು